ಅ) ಬೈಂದೂರು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 30 ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸುವ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ: ಆಕುಕ 194ಆ.ಸಂ.94(ಭಾ) ದಿ.21.1.95ರಲ್ಲಿ ಹಲವು ಆಡಳಿತಾತ್ಮಕ ಕಾರಣಗಳಿಂದ ತಡೆಹಿಡಿಯಲಾಗಿರುವುದರಿಂದ ಈ ಸಮುದಾಯ ಆರೋಗ್ಯ ಕೇಂದ್ರವು ಇನ್ನೂ ಕಾರ್ಯರೂಪಕ್ಕೆ ಬಂದಿರುವುದಿಲ್ಲ.

ಇ) ಇದನ್ನು ತಿಳಿದುಕೊಳ್ಳಲಾಗುತ್ತಿದೆ.

ಈ) ಇದನ್ನು ತಿಳಿದುಕೊಳ್ಳಲಾಗುತ್ತಿದೆ.

ಬೈಂದೂರು ತಾಲ್ಲೂಕಿನ ಪದವಿಪೂರ್ವ ಕಾಲೇಜುಗಳಲ್ಲಿ ಶಿಕ್ಷಕರ ಕೊರತೆ

2532(2982) ಶ್ರೀ ಗೋಪಾಲಪೂಜಾರಿ ಕೆ. (ಕಾರ್ಕಳ) :— ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕುಂದಾಪುರ ತಾಲ್ಲೂಕಿನ ಬೈಂದೂರು ವಿಧಾನಸಭೆ ಕ್ಷೇತ್ರದಲ್ಲಿ ಪದವಿಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ಅವು ಎಲ್ಲೆಲ್ಲಿವೆ. (ವಿವರ ನೀಡುವುದು)

ಆ) ಈ ಪದವಿಪೂರ್ವ ಕಾಲೇಜುಗಳಲ್ಲಿ ಯಾವ ಯಾವ ವಿಷಯಗಳಲ್ಲಿ ಶಿಕ್ಷಕರ ಕೊರತೆ ಇರುವುದು (ವಿವರ ನೀಡುವುದು)

ಇ) ಹಾಗಿದ್ದಲ್ಲಿ, ಕೊರತೆಯಿರುವ ಶಿಕ್ಷಕರ ಹುದ್ದೆಗಳನ್ನು ಎಂದಿನಿಂದ ಭರ್ತಿ ಮಾಡಲಾಗುವುದು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಆರು ಪದವಿಪೂರ್ವ ಕಾಲೇಜುಗಳು ಅವು ಬೈಂದೂರು, ಶಿರೂರು, ನಾವಂದ, ಕಂಬಂದಕೋಟಿ, ವಂಡ್ಸೆ ಮತ್ತು ಉಪ್ಪುಂದಗಳಲ್ಲಿವೆ.

ಆ) ಈ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಕಂಡಂತಿದೆ.

1)	ಬೈಂದೂರು	-	ಇತಿಹಾಸ, ಅರ್ಥಶಾಸ್ತ್ರ
2)	ಶಿರೂರು	-	ಇತಿಹಾಸ, ಅರ್ಥಶಾಸ್ತ್ರ, ಇಂಗ್ಲೀಷ್, ರಾಜ್ಯಶಾಸ್ತ್ರ
3)	ನಾವಂದ	-	ಇತಿಹಾಸ, ಜೀವಶಾಸ್ತ್ರ
4)	ಕಂಬಂದಕೋಟಿ	-	ಕನ್ನಡ, ರಾಜ್ಯಶಾಸ್ತ್ರ
2)	ವಂಡ್ಸೆ	-	ಕನ್ನಡ
3)	ಉಪ್ಪುಂದ	-	ಸಮಾಜಶಾಸ್ತ್ರ, ರಾಜ್ಯಶಾಸ್ತ್ರ.

ಇ) ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿನ ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು (ಶೇಕಡ 55 ಅಂಕಗಳಿಗಿಂತ ಕಡಿಮೆ ಆದರೆ ಶೇಕಡ 50ಕ್ಕಿಂತ ಹೆಚ್ಚು ಇರುವವರು) ಸಕ್ರಮಗೊಳಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ. ಈ ಹುದ್ದೆಗಳನ್ನು ಭರ್ತಿಮಾಡಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ಬೈಂದೂರು ಕ್ಷೇತ್ರದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯಾಧಿಕಾರಿಗಳ ಕರ್ತವ್ಯಲೋಪ

2533(2983) ಶ್ರೀ ಗೋಪಾಲ ಪೂಜಾರಿ ಕೆ. (ಕಾರ್ಕಳ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬೈಂದೂರು ವಿಧಾನಸಭಾ ಕ್ಷೇತ್ರದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಚಿಕಿತ್ಸೆಗಾಗಿ ಬರುವ ಸಾರ್ವಜನಿಕರಿಗೆ ಅಲ್ಲಿಯ ವೈದ್ಯಾಧಿಕಾರಿಗಳ ಗೈರುಹಾಜರಾತಿಯಿಂದ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ದಿನಾಂಕ : 20-6-2001 ರಂದು ಶಾಸಕರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡುವುದಾಗಿ ತಿಳಿಸಿದ್ದರೂ ಸಹ ಗೈರುಹಾಜರಾದ ವೈದ್ಯಾಧಿಕಾರಿಗಳ ಮೇಲೆ ಸರ್ಕಾರ ಕೈಗೊಳ್ಳುವ ಕ್ರಮವೇನು?

ಶ್ರೀ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಬಂದಿರುವುದಿಲ್ಲ.

ಆ) ವೈದ್ಯಾಧಿಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿನ ಸರ್ಕಾರಿ ಸೇವೆಗೆ ಅನಧಿಕೃತ ಗೈರುಹಾಜರಿಯಾಗಿಲ್ಲ. ಆದರೆ ಪ್ರಾಥಮಿಕ ಆರೋಗ್ಯ ಕೇಂದ್ರ, ಹಕ್ಲಾಡಿಯ ಸಭೆಗೆ ಹಾಜರಾಗದೆ ಗೈರುಹಾಜರಾಗಿರುವುದು ತಿಳಿದುಬಂದಿರುತ್ತದೆ. ಸದರಿ ವೈದ್ಯರಿಂದ ವಿವರಣೆ ಕೇಳಲಾಗಿದೆ. ವಿವರಣೆ ಬಂದ ನಂತರ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಮೈಸೂರು ತಾಲ್ಲೂಕಿನಲ್ಲಿ ಕುಟುಂಬ ಕಲ್ಯಾಣ ಕಾರ್ಯಕ್ರಮಗಳು

2534 (2964) ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕಳೆದ ಒಂದು ವರ್ಷ ಅವಧಿಯಲ್ಲಿ ಮೈಸೂರು ತಾಲ್ಲೂಕಿನ ಎಷ್ಟು ಜನರಿಗೆ ಕುಟುಂಬ ಯೋಜನೆ ಶಸ್ತ್ರಚಿಕಿತ್ಸೆ ನಡೆಸಲಾಗಿದೆ. (ಕೇಂದ್ರವಾರು ಹಾಗೂ ಗಂಡಸರು ಮತ್ತು ಮಹಿಳೆಯರ ವಿವರ ಪ್ರತ್ಯೇಕವಾಗಿ ಕೊಡುವುದು)

17H